ಕ್ಷಯರೋಗ ಮುಕ್ತರಾಗಲು ಕಳಂಕ, ಭಯ ಬೇಡ; ನಿಗಧಿತ ಅವಧಿಯೊಳಗೆ ಚಿಕಿತ್ಸೆ ಪಡೆಯಿರಿ-ಡಿಹೆಚ್‌ಓ ಡಾ.ವೈ.ರಮೇಶಬಾಬು

ಬಳ್ಳಾರಿ,ಮಾ.27.ಮೈಕೊ ಬ್ಯಾಕ್ಟೀರಿಯಂ ಟ್ಯೂಬರ್ ಕ್ಯುಲೋಸಿಸ್ ಎಂಬ ರೋಗಾಣುವಿನಿಂದ ಹರಡುವ ಕ್ಷಯರೋಗವನ್ನು ಆರು ತಿಂಗಳುಗಳ ಕಾಲ ಚಿಕಿತ್ಸೆ ಪಡೆದು ಗುಣಮುಖರಾಗಲು ಕಳಂಕ ಮತ್ತು ಭಯ ಬೇಡ. ಎಲ್ಲ ಸರಕಾರಿ ಆರೋಗ್ಯ ಕೇಂದ್ರಗಳಲ್ಲಿ ಉಚಿತ ಔಷಧಿ ಲಭ್ಯವಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ವೈ. ರಮೇಶಬಾಬು ಅವರು ಹೇಳಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ರಾಷ್ಟ್ರೀಯ ಕ್ಷಯರೋಗ ನರ್ಮೂಲನಾ ಕಾರ್ಯಕ್ರಮದಡಿ ನಗರದ ಬಂಡಿಹಟ್ಟಿಯ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಬುಧವಾರದಂದು ಕ್ಷಯರೋಗದ ಚಿಕಿತ್ಸೆಯನ್ನು ಸರಿಯಾಗಿ ಪಡೆದು ಗುಣಮುಖರಾದವರಿಗೆ ಹಾಗೂ ನಗದಿಯಂತೆ ಕ್ಷಯರೋಗಕ್ಕೆ ಚಿಕಿತ್ಸೆ ಪಡೆಯುತ್ತಿರುವವರಿಗೆ ಬೆಂಬಲವಾಗಿ ಏರ್ಪಡಿಸಿದ್ದ ಸನ್ಮಾನ ಕಾರ್ಯಕ್ರಮದಲ್ಲಿ ಮಾತನಾಡಿದರು. ಬಂಡಿಹಟ್ಟಿಯಲ್ಲಿ 43 ಜನರಿಗೆ ಜೆಎಸ್ಡಬ್ಲ್ಯೂ ಫೌಂಡೇಶನ್ ಮೂಲಕ ಪೌಷ್ಟಿಕ ಆಹಾರ ಕಿಟ್‌ಗಳನ್ನು ಒದಗಿಸಿದ್ದು, ಕ್ಷಯರೋಗ ಬಾಧಿತರು ಪ್ರತಿದಿನ ಪೌಷ್ಟಿಕ ಆಹಾರದೊಂದಿಗೆ ಮಾತ್ರೆಗಳನ್ನು ಸಹ ತಪ್ಪದೇ ಸೇವಿಸಬೇಕು.

ಯಾರಿಗಾದರೂ ಎರಡು ವಾರಕ್ಕಿಂತ ಹೆಚ್ಚು ದಿನಗಳ ಕೆಮ್ಮು ಇದ್ದಲ್ಲಿ ತಪ್ಪದೇ ಪರೀಕ್ಷೆ ಮಾಡಿಸುವ ಮೂಲಕ ಬಳ್ಳಾರಿಯನ್ನು ಕ್ಷಯ ಮುಕ್ತ ಮಾಡುವುದಕ್ಕೆ ಬೆಂಬಲ ನೀಡಿರಿ ಎಂದು ತಿಳಿಸಿದರು.ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಅಬ್ದುಲ್ಲಾ ಅವರು ಮಾತನಾಡಿ, 'ಹೌದು! ನಾವು ಕ್ಷಯವನ್ನು ಕೊನೆಗೊಳಿಸಬಹುದು' ಎಂಬ ಘೋಷವಾಕ್ಯದೊಂದಿಗೆ ಈ ವರ್ಷ ಜಾಗೃತಿ ನೀಡಲಾಗುತ್ತಿದ್ದು, ಯಾರೂ ಹಿಂಜರಿಕೆ ತೋರದೇ, ರೋಗವನ್ನು ತ್ವರಿತವಾಗಿ ಪತ್ತೆಹಚ್ಚಲು ಸಹಕರಿಸಬೇಕು ಎಂದರು.

ಈಗಾಗಲೇ ರೋಗ ಪತ್ತೆಹಚ್ಚಲು ನಗರದ ವಿಮ್ಸ್, ಜಿಲ್ಲಾ ಆಸ್ಪತ್ರೆಗಳಲ್ಲಿ ಸಿಬಿನ್ಯಾಟ್ ಯಂತ್ರ ಹಾಗೂ ಟ್ರುನ್ಯಾಟ್ ಮಿಳಿಬ್ಬಗಳನ್ನು ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಅನುಳ್ಳಾ ನ ಮಾಡಲಾಗಿದ್ದು, ರೋಗವನ್ನು ಶೀಘ್ರವಾಗಿ ಪತ್ತೆ ಹಚ್ಚಿ ಚಿಕಿತ್ಸೆ ನೀಡಲು ಸಹಕಾರಿಯಾಗಿದ್ದು, ಸಾರ್ವಜನಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಸಲಹೆ ಮಾಡಿದರು. ಸನ್ಮಾನ: ಕ್ಷಯರೋಗದ ಚಿಕಿತ್ಸೆ ಪಡೆದು ಗುಣಮುಖರಾದವರಿಗೆ, ಚಿಕಿತ್ಸೆ ಪಡೆಯುವವರಿಗೆ ಮತ್ತು ಕ್ಷೇತ್ರ ಮಟ್ಟದಲ್ಲಿ ಉತ್ತಮ ಸೇವೆ ಸಲ್ಲಿಸಿದ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ, ಆರೋಗ್ಯ ನರೀಕ್ಷಣಾಧಿಕಾರಿ, ಔಷಧಿ ಅಧಿಕಾರಿ, ಆಶಾ ಕಾರ್ಯಕರ್ತೆಯರಿಗೆ ಸನ್ಮಾನಸಲಾಯಿತು.

ಈ ಸಂದರ್ಭದಲ್ಲಿ ಆಡಳಿತ ವೈದ್ಯಾಧಿಕಾರಿ ಡಾ.ಯಾಸ್ಮೀನ್, ಡಾ.ನಜಾಮುದ್ದಿನ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್.ದಾಸಪ್ಪನವರ, ಆರೋಗ್ಯ ನೀರಿಕ್ಷಣಾಧಿಕಾರಿ ಪಂಪಾಪತಿ, ಔಷಧಿ ಅಧಿಕಾರಿ ಖರಿಮುನ್ನೀಸಾ ಬೇಗಂ, ಜಿಲ್ಲಾ ಮೆದುಳು ಆರೋಗ್ಯದ ಸಲಹೆಗಾರ ಸಣ್ಣ ಕೇಶವ, ಎಸ್ಟಿಎಸ್ ಓಬಳರೆಡ್ಡಿ, ಎಸ್ಟಿಎಸ್ಟಿಎಸ್ ಬಸವರಾಜ್ ರಾಜಗುರು, ಟಿಬಿಹೆಚ್‌ವಿ ಪ್ರದೀಪ್, ಜೆಎಸ್ಡಬ್ಲ್ಯು ಫೌಂಡೆಶನ್ ಯುಎಇಎಸ್ ರಾಜೇಶ್ ಭಾರತೀಯ, ಡಾ.ಕಾಪಿಪ್ರಸಾದ್, ಪರಿಮಳ ಹಾಗೂ ಪಾರ್ವತಿ, ಮಹಾಲಿಂಗ ಸೇರಿದಂತೆ ಆಶಾ ಕಾರ್ಯಕರ್ತೆಯರು, ಸಿಬ್ಬಂದಿಯವರು, ಸಾರ್ವಜನಕರು ಉಪಸ್ಥಿತರಿದ್ದರು.

ಮೂಡಲಗಿಯಲ್ಲಿ ಪುರಸಭೆಯಿಂದ ಮತದಾನ ಜಾಗೃತಿ ಜಾಥಾ

ಮೂಡಲಗಿ: ಮೇ.7 ರಂದು ಜರುಗುವ ಲೋಕಸಭಾ ಚುನಾವಣಾ ನಮಿತ್ಯ ಬುಧವಾರದಂದು ಪಟ್ಟಣದ ಪುರಸಭೆ ಕಾರ್ಯಾಲಯದಿಂದ ಜಾಥ ಮೂಲಕ ಮತದಾನ ಅರಿವು ಮೂಡಿಸಿದರು.

ಜಾಗೃತಿ ಜಾಥಾವು ಪುರಸಭೆ ಕಾರ್ಯಾಲಯದ ಆವರಣದಿಂದ ಕಲ್ಮೇಶ್ವರ ವೃತ್ತ, ಚನ್ನಮ್ಮ, ಕರೇಮ್ಮಾದೇವಿ, ಬಸವೇಶ್ವರ ಹಾಗೂ ಸಂಗಪ್ಪಣ್ಣ ವೃತ್ತ ಮೂಲಕ ಜರುಗಿತು.

ಜಾಥಾದಲ್ಲಿ ಪುರಸಭೆ ಸಿಬ್ಬಂದಿ, ಅಂಗನವಾಡಿ, ಆಶಾಕಾರ್ಯಕರ್ತೆಯರು, ತಾಲೂಕಾ ಪಂಚಾಯತಿ ಮತ್ತು ಪೊಲೀಸ್ ಇಲಾಖೆ, ಸಿಡಿಪಿ ಕಛೇರಿ ಸಿಬ್ಬಂದಿ ವರ್ಗದವರು ಭಾಗವಹಿಸಿ ಪ್ರತಿಯೋಬ್ಬರು ಮತದಾನ ಮಾಡಬೇಕು, ಮತದಾನ ಮಾಡಿದವರು ಮಹಾಶೂರ, ಮತದಾನಕ್ಕಿಂತ ಮತ್ತೊಂದಿಲ್ಲ, ಪ್ರಜಾ ಪ್ರಭುತ್ವದ ಹಬ್ಬ ಮತದಾನ ಎಂಬ ಘೋಷನೆಯೊಂದಿಗೆ ಮತದಾನ ಅರಿವು ಮೂಡಿಸಿದರು.

ಜಾಥಾದಲ್ಲಿ ಮೂಡಲಗಿ ತಾಪಂ ಇಒ ಹಾಗೂ ಅರಭಾವಿ ಕ್ಷೇತ್ರದ ಸ್ವೀಪ್ ಸಮಿತಿ ಅಧ್ಯಕ್ಷ ನವೀನಪ್ರಸಾದ ಕಟ್ಟಿಮನ, ಸಿಪಿಐ ಅಲ್ದುಲ್ ವಾಜೀದ್ ಪಟೇಲ್, ಪುರಸಭೆ ಪ್ರಭಾರಿ ಮುಖ್ಯಾಧಿಕಾರಿ ಸಿ.ಬಿ.ಪಾಟೀಲ, ಹಿರಿಯ ಆರೋಗ್ಯ ನರೀಕ್ಷ ಚಿದಾನಂದ ಮುಗಳಖೋಡ. ತಾ.ಪಂ ಎಒ ಸಂಗಮೇಶ ರೋಡನ್ನವರ, ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ವಿದ್ಯಾರ್ಥಿ ಒಕ್ಕೂಟದ ಮತ್ತು ರೋವರ್ಸ ಗೈಡ್ಸ್ ಘಟಕ ಅಧ್ಯಕ್ಷ ಪ್ರೊ.ಜಿ.ವಿ.ನಾಗರಾಜ, ಅಂಗನವಾಡಿ ಮೇಲ್ವಿಚಾರಕಿ ಕಸ್ತೂರಿ ಪಡೆನ್ನವರ, ಅಂಗನವಾಡಿ, ಆಶಾಕರ್ಯಕರ್ತೆಯರು ಮತ್ತು ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

ಕೆಂಪು ಮೆಣಸಿಕಾಯಿಗೆ ಬೆಂಬಲ ಬೆಲೆ ನೀಡಿ ಖರಿಧಿಸುವಂತೆ ರೈತ ಸಂಘ ಆಗ್ರಹ

ವಿಜಯಪುರ : ಜಿಲ್ಲೆಯಲ್ಲಿ ಪ್ರತಿವರ್ಷ ಮುಂಗಾರಿನಲ್ಲಿ 13000 ಹೆಕ್ಟರ್ ಹಾಗೂ ಹಿಂಗಾರಿನಲ್ಲಿ ಸುಮಾರು 3500 ಹೆಕ್ಟರ್ ಕೆಂಪು ಮೆಣಸಿನಕಾಯಿಯನ್ನು ಬೆಳೆಯುತ್ತಿದ್ದು, ಸಾಕಷ್ಟು ಹಣ ಹಾಗೂ ಸಮಯ ಕೊಟ್ಟು ಕೂಸಿನಂತೆ ಜೋಪನಮಾಡಿ ಬೆಳೆದ ಬೆಳೆಗೆ ಈಗ ಬೆಲೆ ಇಲ್ಲದೇ ರೈತರು ಸಂಕಷ್ಟ ಪಡುತ್ತಿದ್ದಾರೆ, ಇದಕ್ಕೆ ಸೂಕ್ತ ಮಾರುಕಟ್ಟೆ ಕಲ್ಪಿಸಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ಜಿಲ್ಲಾಧಿಕಾರಿಗಳಾದ ಟಿ. ಬೂಬಾಲನ ಅವರಿಗೆ ಮನವಿ ಸಲ್ಲಿಸಿ ಸರಕಾರದಿಂದ ಬೆಂಬಲ ಬೆಲೆ ನೀಡಿ ಖರಿಧಿಸಬೇಕೆಂದು ಆಗ್ರಹಿಸಿದರು.

ಈ ವೇಳೆ ಜಿಲ್ಲಾಧ್ಯಕ್ಷರಾದ ಸಂಗಮೇಶ ಸಗರ ಮಾತನಾಡುತ್ತಾ ಕಳೆದ ಭಾರಿ ಕ್ವಿಂಟಾಲ ಮೆಣಸಿನಕಾಯಿಗೆ 30000 ರೂಗಳ ವರೆಗೆ ಖರಿಧಿಸಲಾಗಿತ್ತು, ಆದರೆ ಈಗ ಬೆಲೆ ಪಾತಾಳ ಸೇರಿದಂತಾಗಿದೆ ಈಗ ಕ್ವಿಂಟಾಲಗೆ 9000ದ ಆಚೆ ಈಚೆ ಕೇಳುತ್ತಿದ್ದಾರೆ, ಇದರಲ್ಲಿ ದಲ್ಲಾಳಿಗಳ ಕೈವಾಡದಿಂದಾಗಿ ರೈತರು ನಷ್ಟ ಅನುಭವಿಸುವಂತಾಗಿದೆ, ಇದರಿಂದ ರೈತರು ಖರ್ಚು ಮಾಡಿರುವುಷ್ಟು ಸಹ ಅವರ ಕೈಗೆ ಸಿಗುತ್ತಿಲ್ಲ, ಆದ್ದರಿಂದ ಕೂಡಲೇ ಸರಕಾರದಿಂದ ಬೆಂಬಲ ಬೆಲೆ ನೀಡಿ ಖರಿಧಿಸಬೇಕು, ರೈತರ ಪರವಾಗಿ ಸರಕಾರಗಳು ಇರಬೇಕು , ಕೂಡಲೇ ಸಂಬಂಧಿಸಿದ ಎ.ಪಿ.ಎಂ.ಸಿ ಹಾಗೂ ತೋಟಗಾರಿಕಾ ಇಲಾಖೆಯ ಅಧಿಕಾರಿಗಳೊಡನೆ ಚರ್ಚಿಸಿ ಸರಕಾರಕ್ಕೆ ಒಂದು ಸೂಕ್ತ ವರದಿ ಕಳುಹಿಸಿ ಒಳ್ಳೆಯ ಬೆಲೆಯೊಂದಿಗೆ ಮೆಣಸಿನಕಾಯಿ ಖರಿಧಿಸಬೇಕು ಎಂದು ಆಗ್ರಹಿಸಿದರು.

ಈ ವರ್ಷ ಸರಿಯಾಗಿ ಮಳೆ ಬಾರದೇ ಸಾಲ ಸೋಲ ಮಾಡಿರುವ ರೈತನಗೆ ಮುಂಗಾರು ಹಾಗೂ ಹಿಂಗಾರು ಮಳೆ ಆಗದೇ ಯಾವ ಬೆಳೆ ಕೂಡಾ ಸರಿಯಾಗಿ ಬೆಳೆಯದೇ ಆತ್ಮಹತ್ಯೆ ಅಂತಹ ಕೆಟ್ಟ ಘಟನೆಗಳು ನಡೆದಿರುವುದು ಕಂಡುಬರುತ್ತಿವೆ, ಈಗಾಗಲೇ ಹಿಂಗಾರು ಸಹ ಸಂಪೂರ್ಣ ಕೈಕೊಟ್ಟಿರುವುದರಿಂದ ರೈತರಿಗೆ ಪರಿಹಾರ ಹಾಗೂ ಫಸಲ ಭೀಮಾ ಯೋಜನೆಯಡಿ ವಿಮೆ ತುಂಬಿರುವ ರೈತರಿಗೂ ವಿಮಾ ಪರಿಹಾರ ಕೊಡಬೇಕು ಎಂದರು, ವಿಮೆಯಲ್ಲಿ ಅವ್ಯವಹಾರ ನಡೆಯುತ್ತಿರುವ ಕುರಿತು ಮಾನ್ಯ ಜಿಲ್ಲಾಧಿಕಾರಿಗಳು ಸೂಕ್ತ ತನಖೆ ಮಾಡಿ ನಷ್ಟಗೊಂಡ ರೈತರಿಗೆ ಪರಿಹಾರ ನೀಡುವಂತೆ ಆದೇಶಿಸಬೇಕು ಎಂದರು.

ಈ ವೇಳೆ ಜಿಲ್ಲಾ ಸಂಚಾಲಕರಾದ ರಾಮನಗೌಡ ಪಾಟೀಲ(ಬ್ಯಾಲ್ಯಾಳ), ಸಹಸಂಚಾಲಕರಾದ ಮಹಾಂತೇಶವ ಮಮದಾಪುರ, ತಾಲೂಕಾ ಉಪಾಧ್ಯಕ್ಷರಾದ ಮಹಾದೇವಪ್ಪ ತೇಲಿ, ತಾ.ಪ್ರಧಾನ ಕಾರ್ಯ ದಶಿಗಳಾದ ಮಲ್ಲಿಕರ್ಜುನ ಗೋಡೆಕಾರ, ವಿಜಯಪುರ ನಗರ ಘಟಕದ ಅಧ್ಯಕ್ಷರಾದ ಸಂಗಪ್ಪ ಚಲವಾದಿ, ಮುಖಂಡರಾದ ತಪ್ಪಣ್ಣ ನಾಟಿಕಾರ, ಪ್ರಭು ಕಾರಜೋಳ, ಮಹಾಂತೇಶ ಮಹಾಂತಮಠ ಇದ್ದರು.

ಮೂಡಲಗಿ: ಶಸ್ತ್ರ ಚಿಕೀತ್ಸೆಗೆ ಒಳಗಾಗಿರುವ ಪಟ್ಟಣದ ಪತ್ರಕರ್ತ ಅಲ್ತಾಫ್ ಹವಾಲ್ದಾರ ಅವರಿಗೆ ಕಾಂಗ್ರೇಸ್ ಮುಖಂಡ ಲಕ್ಕನ್ ಸವಸುದ್ದಿ ಅವರು ಹತ್ತು ಸಾವಿರ ರೂ ಸಹಾಯಧನ ನೀಡಿದರು. ಈ ಸಂಧರ್ಭದಲ್ಲಿ ಪತ್ರಕರ್ತರಾದ ಎಲ್.ಸಿ.ಗಾಡವಿ, ಕೆ.ಬಿ.ಗಿರೆಣ್ಣವರ, ಮಲ್ಲು ಬೋಳನವರ, ಚಂದ್ರು ಪತ್ತಾರ ಮತ್ತಿತರರು ಇದ್ದರು.

ಕಡ್ಡಾಯ ಮತದಾನ ನಮ್ಮ ಹಕ್ಕು-ಸಹಾಯಕ ಚುನಾವಣೆ ಅಧಿಕಾರಿ ಶ್ರೀಶೈಲ ತಳವಾರ ಹೇಳಿಕೆ

ನರಗುಂದ : ಮೇ-07 ರ ಮತದಾನದ ದಿನದಂದು ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡಬೇಕೆಂದು ನರಗುಂದ ವಿಧಾನಸಭಾ ಕ್ಷೇತ್ರದ ಸಹಾಯಕ ಚುನಾವಣೆ ಅಧಿಕಾರಿಗಳು ಹಾಗೂ ನರಗುಂದ ತಹಶೀಲ್ದಾರ ಶ್ರೀಶೈಲ್ ತಳವಾರ ಹೇಳಿದರು.

ನರಗುಂದ ನಗರದಲ್ಲಿ ಗದಗ ಜಿಲ್ಲಾ ಮತ್ತು ನರಗುಂದ ತಾಲೂಕು ಚುನಾವಣೆ ಸ್ವೀಪ್ ಸಮಿತಿ, ವಿವಿದ್ಧೋದೇಶ ಪುನರ್ ವಸತಿ (ಒಖಿಫ) ಮತ್ತು ಗ್ರಾಮೀಣ ಪುನರ್ ವಸತಿ (ಗಿಖಿಫ) ಹಾಗೂ ತಾಲೂಕು ಪಂಚಾಯತ ನರಗುಂದ ವತಿಯಿಂದ ಹಮ್ಮಿಕೊಂಡಿದ್ದ ಸಾರ್ವಜನಿಕರಿಗೆ ಮತದಾನ ಜಾಗೃತಿ ಜಾಥಾದಲ್ಲಿ ಭಾಗವಹಿಸಿ ಮಾತನಾಡಿದರು.

ಲೋಕಸಭೆ ಚುನಾವಣೆಯಲ್ಲಿ ಎಲ್ಲ ಮತದಾರರು ಕಡ್ಡಾಯವಾಗಿ ಮತದಾನ ಮಾಡಬೇಕು. ಮತದಾನ ನಮ್ಮ ಹಕ್ಕು ನಮ್ಮ ಇಷ್ಟದ ಅಭ್ಯರ್ಥಿಗೆ ಮತ ಚಲಾಯಿಸುವ ಕೆಲಸ ನಮ್ಮದಾಗಬೇಕು. ಈ ಭಾರಿ ಲೋಕಸಭಾ ಚುನಾವಣೆಯಲ್ಲಿ 100% ರಷ್ಟು ಮತದಾನ ಮಾಡಿದ್ರೆ ಮಾತ್ರ ಪ್ರಜಾಪ್ರಭುತ್ವದ ಪ್ರಾಮುಖ್ಯತೆಗೆ ಅರ್ಥ ಬರುತ್ತದೆ. ಹೆದರಿಕೆ ಬೆದರಿಕೆ ಅಂಜದೇ ಧೈರ್ಯವಾಗಿ ಮತವನ್ನು ಚಲಾಯಿಸಿ ಸಂವಿಧಾನ ನೀಡಿರುವ ಮತದಾನದ ಹಕ್ಕನ್ನು ಚಲಾಯಿಸಿ ಎಂದರು. ಜಾಥಾದಲ್ಲಿ ಭಾಗವಹಿಸಿ ಮಾತನಾಡಿದ ತಾಲೂಕು ಸ್ವೀಪ್ ಸಮಿತಿ ಅಧ್ಯಕ್ಷರು ಹಾಗೂ ತಾಲೂಕು ಪಂಚಾಯತ ನರಗುಂದದ ಕಾರ್ಯನಿರ್ವಾಹಕ ಅಧಿಕಾರಿಗಳಾದ ಸೋಮಶೇಖರ ಬಿರಾದರ ಅವರು, ಸಾರ್ವಜನಿಕರು ಮತದಾನದಿಂದ ತಪ್ಪಿಸಿಕೊಳ್ಳದೇ ತಮ್ಮ ಮಕ್ಕಳ ಭವಿಷ್ಯದ ಹಿತದೃಷ್ಟಿಯಿಂದ ಕಡ್ಡಾಯವಾಗಿ ಮತ ಚಲಾಯಿಸಿಬೇಕೆಂದು ತಿಳಿಸಿದರು.

ಕಡ್ಡಾಯ ಮತದಾನ ಜಾಗೃತಿ ಜಾಥಾದಲ್ಲಿ ಭಾಗವಹಿಸಿದ ಆಶಾಕಾರ್ಯಕರ್ತೆಯರು ಹಾಗೂ ಅಧಿಕಾರಿ ಸಿಬ್ಬಂದಿ ವರ್ಗದವರಿಗೆ ತಾಲೂಕು ಪಂಚಾಯತ ಮಾಹಿತಿ ಮತ್ತು ಶಿಕ್ಷಣ ಸಂಯೋಜಕರಾದ ಸುರೇಶ ಬಾಳಿಕಾಯಿ ಅವರು ಮತದಾನ ಪ್ರತಿಜ್ಞಾ ವಿಧಿಯನ್ನು ಬೋಧಿಸಿದರು.

ನಗರದ ಪುರಸಭೆ ಮುಖ್ಯ ಕಚೇರಿಯಿಂದ ಮತದಾನ ಜಾಗೃತಿ ಜಾಥಾ ಆರಂಭವಾಗಿ ನಗರದ ಟಿ.ಎಂ.ಸಿ ರೋಡ, ಸರ್ವಜ್ಞ ಸರ್ಕಲ್, ಹುಬ್ಬಳ್ಳಿ-ಬಿಜಾಪುರ ಹೆದ್ದಾರಿ ಮೂಲಕ ಸಂಚರಿಸಿ ನಗರದ ಶಿವಾಜಿ ಸರ್ಕಲ್ ನಲ್ಲಿ ಮತದಾನ ಕುರಿತಾದ ವಿಶೇಷ ಘೋಷಣೆಗಳನ್ನು ಕೂಗುತ್ತಾ ಸಾರ್ವಜನಿಕರಲ್ಲಿ ಕಡ್ಡಾಯ ಮತದಾನ ಕುರಿತು ಜಾಗೃತಿ ಮೂಡಿಸಲಾಯಿತು.

ಕಡ್ಡಾಯ ಮತದಾನ ಜಾಗೃತಿ ಜಾಥಾದಲ್ಲಿ ಡಾ.ಹಂಪಣ್ಣ ಸಜ್ಜನ ಚುನಾವಣಾಧಿಕಾರಿಗಳು ನರಗುಂದ ವಿಧಾನಸಭಾ ಕ್ಷೇತ್ರ, ತಾಲೂಕು ಪಂಚಾಯತ ಸಿಬ್ಬಂದಿ ವರ್ಗ, ವಿವಿದ್ಧೋದೇಶ ಪುನರ್ ವಸತಿ (ಒಖಿಫ) ಮತ್ತು ಗ್ರಾಮೀಣ ಪುನರ್ ವಸತಿ (ಗಿಖಿಫ) ಕಾರ್ಯಕರ್ತರು ಹಾಜರಿದ್ದರು.

ಸುಧಾಮೂರ್ತಿ ಬೇರೆಯವರಿಗೂ ಮಾದರಿಯಾಗಲಿ ಎಂಬ ಸದುದ್ದೇಶದಿಂದ ರಾಜ್ಯಸಭೆಗೆ ನಾಮನಿರ್ದೇಶನ

ವಿಜಯಪುರ-: ಹೆಮ್ಮೆಯ ಕನ್ನಡತಿ, ಸಮಾಜಸೇವಕಿ, ಟೆಕ್ ದೈತ್ಯ ಇನ್ಫೋಸಿಸ್ ಕಟ್ಟುವಲ್ಲಿ ಪತಿ ನಾರಾಯಣ ಮೂರ್ತಿಗೆ ಸಾಥ್ ಕೊಟ್ಟ ಸಾಧಕಿ, ಕನ್ನಡಿಗರಿಂದ ಪ್ರೀತಿಯಿಂದ ಅಮ್ಮ ಎಂದೇ ಕರೆಸಿಕೊಳ್ಳುವ ಪರಮ ಪರೋಪಕಾರಿ ಸುಧಾಮೂರ್ತಿ ಅವರು ಇತ್ತೀಚೆಗೆ ರಾಜ್ಯಸಭೆಗೆ ನಾಮನಿರ್ದೇಶನಗೊಂಡಿದ್ದಾರೆ. ಸಮಾಜಸೇವೆ ವಿಭಾಗದಿಂದ ಸುಧಾಮೂರ್ತಿ ಅವರನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ರಾಜ್ಯಸಭೆಗೆ ನಾಮ ನಿರ್ದೇಶನ ಮಾಡಿದ್ದಾರೆ.

ಈ ವರ್ಷದ ಮಹಿಳಾ ದಿನಾಚರಣೆಯಂದೇ ಸುಧಾಮೂರ್ತಿ ರಾಜ್ಯಸಭೆಗೆ ನೇಮಕಗೊಂಡಿದ್ದಾರೆ. ಸುಧಾಮೂರ್ತಿ ಅವರು ಬೇರೆಯವರಿಗೂ ಮಾದರಿಯಾಗಲಿ ಎಂಬ ಸದುದ್ದೇಶದಿಂದ ಮಹಿಳಾ ದಿನಾಚರಣೆಯಂದೇ ಸುಧಾ ಮೂರ್ತಿ ಅವರನ್ನು ರಾಜ್ಯಸಭೆಗೆ ನಾಮನಿರ್ದೇಶನ ಮಾಡಲಾಗಿದೆ ಎಂದು ಬಣ್ಣಿಸಲಾಗುತ್ತಿದೆ.

ರಾಷ್ಟ್ರಪತಿ ಶ್ರೀಮತಿ ದ್ರೌಪದಿ ಮುರ್ಮು ಅವರು ಡಾ ಸುಧಾಮೂರ್ತಿಯವರನ್ನು ರಾಜ್ಯಸಭೆಗೆ ನಾಮನಿರ್ದೇಶನ ಮಾಡಿದ್ದಾರೆ ಎಂಬ ಖುಷಿಯ ವಿಚಾರವನ್ನು ಪಿಎಂ ಮೋದಿ ಟ್ವೀಟ್ ಮೂಲಕ ಹಂಚಿಕೊಂಡಿದ್ದು, ಟ್ವೀಟ್‌ನಲ್ಲಿ "ಭಾರತದ ರಾಷ್ಟ್ರಪತಿಗಳು ಸುಧಾ ಮೂರ್ತಿ ಅವರನ್ನು ರಾಜ್ಯಸಭೆಗೆ ನಾಮನಿರ್ದೇಶನ ಮಾಡಿರುವುದು ನನಗೆ ಖುಷಿ ತಂದಿದೆ. ಸಮಾಜಸೇವೆ, ಲೋಕೋಪಕಾರಿ ಮತ್ತು ಶಿಕ್ಷಣ ಸೇರಿದಂತೆ ವಿವಿಧ ಕ್ಷೇತ್ರಗಳಿಗೆ ಸುಧಾಮೂರ್ತಿಯವರ ಕೊಡುಗೆ ಅಪಾರ ಮತ್ತು ಸ್ಫೂರ್ತಿದಾಯಕವಾಗಿದೆ. ರಾಜ್ಯಸಭೆಯಲ್ಲಿ ಅವರ ಉಪಸ್ಥಿತಿಯು ನಮ್ಮ 'ಪ್ರಬಲ ಸಾಕ್ಷಿಯಾಗಿದೆ. ನಾರಿ ಶಕ್ತಿ', ನಮ್ಮ ದೇಶದ ಭವಿಷ್ಯ ರೂಪಿಸುವಲ್ಲಿ ಮಹಿಳೆಯರ ಶಕ್ತಿ ಮತ್ತು ಸಾಮರ್ಥ್ಯವನ್ನು ಉದಾಹರಿಸುತ್ತದೆ. ರಾಜ್ಯಸಭೆ ಸದಸ್ಯೆಯಾಗಿ ಅವರ ಮುಂದಿನ ಪಯಣ ಶುಭಕರವಾಗಿರಲಿ." ಎಂದು ಅವರು ತಮ್ಮ ಆಶಯ ವ್ಯಕ್ತಪಡಿಸಿದ್ದಾರೆ.

ರಾಜ್ಯಸಭೆಸದಸ್ಯಗಿಸುಧಾಮೂರ್ತಿ ಅವರು ದೆಹಲಿಯಲ್ಲಿ ಕನ್ನಡದಲ್ಲೇ ಪ್ರಮಾಣ ವಚನ ಸ್ವೀಕರಿಸಿದ್ದು ಬಹಳ ವಿಶೇಷ ಸಂಗತಿಯಾಗಿದೆ. ಉತ್ತರ ಕರ್ನಾಟಕ ಭಾಗದ ಹುಬ್ಬಳ್ಳಿ ಕಡೆಯವರಾದ ಸುಧಾಮೂರ್ತಿಯವರಿಗೆ ಕನ್ನಡ ಭಾಷೆಯೆಂದರೆ ವಿಶೇಷ ಒಲವು, ಅಚ್ಚುಮೆಚ್ಚು. ಅದನ್ನು ಪದೇಪದೇ ನಿರೂಪಿಸುತ್ತಿರುತ್ತಾರೆ. ರಾಜ್ಯಸಭೆ ಸದಸ್ಯರಾಗಿ ಕೂಡ ಅವರು ಕನ್ನಡದಲ್ಲಿಯೇ ಪ್ರಮಾಣವಚನ ಸ್ವೀಕರಿಸಿದ್ದು ಸಹ ಇನ್ನೊಂದು ಸಾಕ್ಷಿಯಾಗಿದೆ. ಮೂಲತಃ ಇಂಜಿನಿಯರ್ ಆಗಿರುವ ಸುಧಾ ಮೂರ್ತಿ ಅವರು ತಮ್ಮ ಪತಿ ಎನ್ ಆರ್ ನಾರಾಯಣ ಮೂರ್ತಿ ಅವರ ಸಮ್ಮುಖದಲ್ಲಿ ರಾಜ್ಯಸಭಾ ಸಂಸದರಾಗಿ ಕನ್ನಡ ಭಾಷೆಯಲ್ಲಿ ಪ್ರಮಾಣ ವಚನ ಸ್ವೀಕರಿಸಿದರು.

ಸುಧಾಮೂರ್ತಿ ಅವರು "ವಿಶ್ವ ಮಹಿಳಾ ದಿನಾಚರಣೆಯಂದೇ ರಾಜ್ಯಸಭೆಗೆ ನಾಮನಿರ್ದೇಶನಗೊಂಡಿರುವುದು ಡಬಲ್ ಅಚ್ಚರಿ ಮೂಡಿಸಿದೆ. ಮಹಿಳಾ ದಿನದಂದು ರಾಜ್ಯಸಭೆಗೆ ಆಯ್ಕೆ ಮಾಡಿರುವುದು ಡಬಲ್ ಆಶ್ಚರ್ಯಕರವಾಗಿದೆ. ತಾನು ಎಂದಿಗೂ ಈ ಸ್ಥಾನವನ್ನು ನಿರೀಕ್ಷೆ ಮಾಡಿರಲಿಲ್ಲ